ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 597 ಎಂಎನ್‌ವೈ 2017, ದಿನಾಂಕ: 11-12-2017 ರಲ್ಲಿ "Improvements Suvarna Mahotsava Bhavana play ground at Vidyaranyapura main road in Ward No.09" ಕಾಮಗಾರಿಯ ಟೆಂಡರ್‌ಗೆ ಅನುಮೋದನೆ ನೀಡಿದ್ದು, ಸದರಿ ಕಾಮಗಾರಿಯ ಸ್ಥಳ ಬದಲಾವಣೆ ಮತ್ತು ಬದಲಿ ಕಾಮಗಾರಿಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್‌ಎಫ್‌ಸಿ 2016 (ಭಾ-1), ದಿನಾಂಕ: 21-06-2016.
2. ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್‌ಎಫ್‌ಸಿ 2016 ದಿನಾಂಕ: 04-03-2016.
3. ಸರ್ಕಾರದ ಆದೇಶ ಸಂಖ್ಯೆ: ನಅಇ 597 ಎಂಎನ್‌ವೈ 2017, ದಿನಾಂಕ: 11-12-2017.
4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿಬಿಎಂಪಿ/ಮು.ಆ/ಪಿ.ಆರ್/930/2021-22, ದಿನಾಂಕ: 11-06-2021.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 21-06-2016ರ ಆದೇಶದಲ್ಲಿ ನಗರೋತ್ಥಾನ ಯೋಜನೆ, ವಿಶೇಷ ಮೂಲಭೂತ ಸೌಕರ್ಯಕ್ಕೆ ಬಂಡವಾಳ ಬೆಂಬಲ ಮತ್ತು ಸರೋವರ ಅಭಿವೃದ್ಧಿ ಯೋಜನೆಯಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು 2016-17 ಮತ್ತು 2017-18ನೇ ಸಾಲಿನಲ್ಲಿ ಒಟ್ಟು ರೂ.7300-00 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾಯೋಜನೆಗೆ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ. ಸದರಿ ಆದೇಶದ ಅನುಬಂಧ-11 (Spill over work) ಮುಂದುವರೆದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 04.03.2016ರ ಆದೇಶದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 279 ಎಸ್‌ಎಫ್‌ಸಿ 2015 ದಿನಾಂಕ: 08-01-2016ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಗೊಂಡ ಸಿಎಂಸಿ ಮತ್ತು ಟಿಎಂಸಿಗಳ ಜೊತೆಗೆ ಸುತ್ತಮುತ್ತಲಿನ ವಾರ್ಡ್‌ಗಳನ್ನು ಸೇರ್ಪಡೆ ಮಾಡಿಕೊಂಡು ಸಮಗ್ರ ಅಭಿವೃದ್ಧಿಗೆ ಒದಗಿಸಿರುವ ರೂ.250-00 ಕೋಟಿಗಳ ಪೈಕಿ ಕೆಲವು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ರೂ.175-00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯ ಯೋಜನೆಗೆ ಅನುಮೋದನೆ ನೀಡಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ: 46 ರಲ್ಲಿ "Improvements Suvarna Mahotsava Bhavana play ground on Vidyaranyapura main road in Ward No.09, Vidyaranyapura, Vidyaranyapura Sub Division" ಕಾಮಗಾರಿಗೆ ರೂ.150.00 ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ.

. . .2/-

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 11-12-2017ರ ಆದೇಶದಲ್ಲಿ, "Improvements Suvarna Mahotsava Play Gound at Vidyaranyapura Main Road in Ward No. 09"ರ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ದಿನಾಂಕ: 04-03-2016ರ ಆದೇಶದ ಕ್ರಮ ಸಂಖ್ಯೆ: 46 ರಲ್ಲಿನ ಕ್ರಿಯಾ ಯೋಜನೆಯಲ್ಲಿ ಅನುಮೋದನೆಗೊಂಡಿರುವ ಕಾಮಗಾರಿಗಳ ಅಂದಾಜು ಮೊತ್ತ ರೂ.1.50 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಹಾಗೂ ಅಧಿಕಾರಯುಕ್ತ ಸಮಿತಿಯು ಗುತ್ತಿಗೆದಾರರಾದ ಶ್ರೀ ಅಬ್ಬುಸಾಂಬಶಿವಾರೆಡ್ಡಿ ರವರು ನಮೂದಿಸಿರುವ ಅಂತಿಮ ಮೊತ್ತ ರೂ.1.2996/- ಕೋಟಿಗಳು, ದಿನಾಂಕ: 01-07-2017 ರಿಂದ ಅನ್ವಯವಾಗುವ ಪರಿಷ್ಕೃತ ಸಾಮಗ್ರಿ ದರಗಳಿಗೆ ಹೋಲಿಸಿದಾಗ ಶೇಕಡಾ 6.19% ರಷ್ಟು ಕಡಿಮೆ ದರಗಳಿಗೆ ಮಿತಿಗೊಳಿಸಿ, ಕೆಲವು ಷರತ್ತುಗಳಿಗೆ ಒಳಪಟ್ಟು ಟೆಂಡರ್ಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ದಿನಾಂಕ: 11-06-2021ರ ಪತ್ರದಲ್ಲಿ ಬಿಬಿಎಂಪಿ ಮುಖ್ಯ ಆಯುಕ್ತರು, 2015-16ನೇ ಸಾಲಿನ ಏಳು ಸಿಎಂಸಿ ಮತ್ತು ಒಂದು ಟಿಎಂಸಿ ಪ್ರದೇಶ ಸಮಗ್ರ ಅಭಿವೃದ್ಧಿ ಯೋಜನೆಯಡಿ ಅನುಮೋದನೆಯಾಗಿರುವ ಕಾಮಗಾರಿಗಳಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್ಎಫ್ಸಿ 2016-17(ಭಾ-1), ದಿನಾಂಕ: 21.06.2017ರಲ್ಲಿ ಅನುಬಂಧ-11 (Spill over work) ಮುಂದುವರೆದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿರುತ್ತದೆ. ದಿನಾಂಕ: 04.03.2016ರ ಆದೇಶದಲ್ಲಿ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರಕ್ಕೆ ರೂ.40.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಒಟ್ಟು 62 ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ಸದರಿ ಕ್ರಿಯಾಯೋಜನೆಯ ಕ್ರಮ ಸಂಖ್ಯೆ: 46 ರಲ್ಲಿ "Improvements Suvarna Mahotsava Bhavana play ground at Vidyaranyapura main road in Ward No.09" ಕಾಮಗಾರಿಗೆ ರೂ.150.00 ಲಕ್ಷಗಳು ಮಂಜೂರಾಗಿರುತ್ತದೆ.

ವಾಲಿಕೆಯ ಕಾರ್ಯಪಾಲಕ ಅಭಿಯಂತರರು (ಯೋಜನೆ-ಯಲಹಂಕ ವಿಭಾಗ) ರವರ ವರದಿಯಂತೆ, ಸದರಿ "Improvements Suvarna Mahotsava Bhavana play ground at Vidyaranyapura main road in Ward No.09" ಕಾಮಗಾರಿಯ ಅಂದಾಜು ಪಟ್ಟಿಯ ಮೊತ್ತ ರೂ.150.00 ಲಕ್ಷಗಳಿಗೆ ದಿನಾಂಕ: 13.04.2017 ರಂದು ಇ-ಪ್ರೊಕ್ಯೂರ್ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಿದ್ದು, ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರಾದ ಶ್ರೀ ಅಬ್ಬು ಶಾಂಬಶಿವ ರೆಡ್ಡಿ ರವರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 597 ಎಂಎನ್ವೈ 2017, ದಿನಾಂಕ: 11.12.2017ರ ಅನುಮೋದನೆಯಂತೆ ದಿನಾಂಕ: 03.01.2018ರಲ್ಲಿ ಕಾರ್ಯಾದೇಶ ನೀಡಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಪ್ರಾರಂಭಿಸುವ ಸಮಯದಲ್ಲಿ ಸ್ಥಳೀಯ ನಾಗರಿಕರು ವಿರೋಧ ವ್ಯಕ್ತಪಡಿಸಿ ಕಾಮಗಾರಿಯನ್ನು ಸ್ಥಗಿತಗೊಳಿಸಿರುತ್ತಾರೆಂದು ತಿಳಿಸಿರುತ್ತಾರೆ.

ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರು ದಿನಾಂಕ: 121.01.2021ರಂದು ಮನವಿ ಸಲ್ಲಿಸಿ, ಸದರಿ ಕಾಮಗಾರಿಯ ಬದಲಾಗಿ ವಾರ್ಡ್ ನಂ.8 ರಲ್ಲಿ ನಿರ್ಮಿಸುತ್ತಿರುವ ಒಳಾಂಗಣ ಕ್ರೀಡಾಂಗಣ ಕಾಮಗಾರಿಯನ್ನು ಪೂರ್ಣಗೊಳಿಸಲು ಹೆಚ್ಚುವರಿ ಅನುದಾನದ ಅವಶ್ಯಕತೆ ಇರುವುದರಿಂದ ಈ ಕೆಳಕಂಡ ಬದಲಿ ಕಾಮಗಾರಿಯನ್ನು ನಿರ್ವಹಿಸುವಂತೆ ಕೋರಿರುತ್ತಾರೆಂದು ಮುಖ್ಯ ಆಯುಕ್ತರು ತಿಳಿಸಿರುತ್ತಾರೆ.

. . .3/-

ಕ್ರ.ಸಂ.	ಕಾಮಗಾರಿಯ ಹೆಸರು	ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಬದಲಿ ಕಾಮಗಾರಿಯ ಹೆಸರು	ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ
2)	Improvements Suvarna Mahotsava Bhavana play ground at Vidyaranyapura main road in Ward No.09	150.00	Balance works and other amenities to Indoor Stadium at Sahakaranagar in Ward No.08	150.00

ಮುಖ್ಯ ಅಭಿಯಂತರರು (ಯಲಹಂಕ ವಲಯ) ರವರ ವರದಿಯಂತೆ, **1)** ಕಾಮಗಾರಿಯ ಸ್ಥಳ ಬದಲಾವಣೆ ಅನುಮೋದನೆ **2)** ಬದಲಿ ಕಾಮಗಾರಿಯ ಅನುಮೋದನೆ ಮತ್ತು **3)** ಮೇಲ್ಕಂಡ ಕಾಮಗಾರಿಯನ್ನು ಟೆಂಡರ್ ಮುಖೇನ ನಿರ್ವಹಿಸಲು ಸಾಕಷ್ಟು ಸಮಯಾವಕಾಶ ತೆಗೆದುಕೊಳ್ಳುವುದರಿಂದ ಹಾಲಿ ಗುತ್ತಿಗೆದಾರರಿಂದಲೇ ಕಾಮಗಾರಿಯನ್ನು ನಿರ್ವಹಿಸಲು ಅನುಮೋದನೆ ನೀಡುವಂತೆ ಕೋರಿರುವ ಅಂಶಗಳಿಗೆ ಸಂಬಂಧಿಸಿದಂತೆ "Improvements Suvarna Mahotsava play ground" ಕಾಮಗಾರಿಯ ಅಭಿವೃದ್ಧಿಗಾಗಿ ಮಂಜೂರಾಗಿದ್ದ, ರೂ.150.00 ಲಕ್ಷಗಳನ್ನು ವಾರ್ಡ್ ನಂ.08 ರಲ್ಲಿ ಅನುದಾನ ಲಭ್ಯತೆ ಇಲ್ಲದೇ ಅಪೂರ್ಣಗೊಂಡಿರುವ ಒಳಾಂಗಣ ಕ್ರೀಡಾಂಗಣದ "Balance works and other amenities to Indoor Stadium at Sahakaranagar in Ward No.08" ಕಾಮಗಾರಿಯನ್ನು ಮಾನ್ಯ ಸ್ಥಳೀಯ ಶಾಸಕರ ಕೋರಿಕೆಯಂತೆ ಬದಲಿ ಕಾಮಗಾರಿಯಾಗಿ ಕೈಗೊಳ್ಳಲು ಜಾಬ್ ಕೋಡ್ ನೀಡಲು ಅನುಮತಿ ಹಾಗೂ ಸದರಿ ಕಾಮಗಾರಿಯನ್ನು ಹೊಸದಾಗಿ ಟೆಂಡರ್ ಆಹ್ವಾನಿಸಿ ಗುತ್ತಿಗೆದಾರರನ್ನು ನೇಮಿಸಲು ಸಾಕಷ್ಟು ಸಮಯಾವಕಾಶ ತೆಗೆದುಕೊಳ್ಳುವುದರಿಂದ ಹಾಲಿ ಗುತ್ತಿಗೆದಾರರಿಂದಲೇ ಕಾಮಗಾರಿಯನ್ನು ನಿರ್ವಹಿಸಲು ಹಾಗೂ ಕ್ರಿಯಾ ಯೋಜನೆಯ ಅನುಮೋದನೆಗಾಗಿ ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 199 ಎಸ್ಎಫ್ಸಿ 2016 (ಭಾಗ-1), ದಿನಾಂಕ: 21-06-2016 ರ ಆದೇಶದ ಕ್ರಮ ಸಂಖ್ಯೆ: 04 ರಲ್ಲಿ "ಅನುಮೋದನೆ ನೀಡಲಾದ ಕ್ರಿಯಾ ಯೋಜನೆಯಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸತಕ್ಕದ್ದು. ಅನಿವಾರ್ಯ ಕಾರಣಗಳಿಂದ ಬದಲಾವಣೆಗಳು ಅತ್ಯಂತ ಅವಶ್ಯಕವೆಂದು ಕಂಡುಬಂದಲ್ಲಿ ಅಂತಹ ಕಾಮಗಾರಿಗಳನ್ನು ಸೂಕ್ತ ಸಮಜಾಯಿಷಿಯೊಂದಿಗೆ ಆಯುಕ್ತರು, ಬಿಬಿಎಂಪಿ ರವರು ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು" ಎಂಬ ಷರತ್ತು ವಿಧಿಸಲಾಗಿರುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮುಖ್ಯ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುವ ದಿನಾಂಕ: 11-06-2021 ರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ನಅಇ 104 ಎಂಎನ್ವೈ 2021,
ಬೆಂಗಳೂರು, ದಿನಾಂಕ: 19-11-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್ಎಫ್ಸಿ 2016, ದಿನಾಂಕ: 04-03-2016ರ ಕ್ರಮ ಸಂಖ್ಯೆ: 46ರಲ್ಲಿ ಅನುಮೋದನೆಯಾಗಿರುವ ರೂ.1.50 ಕೋಟಿಗಳ ಅಂದಾಜು ಮೊತ್ತದ "Improvements Suvarna Mahotsava Bhavana play ground at

. . .4/-

Vidyaranyapura main road in Ward No.09" ಕಾಮಗಾರಿಯನ್ನು, ಕನಿಷ್ಠ ದರ ನಮೂದಿಸಿದ ಗುತ್ತಿಗೆದಾರರಾದ ಶ್ರೀ ಅಬ್ಬು ಶಾಂಬಶಿವ ರೆಡ್ಡಿ ರವರಿಗೆ ಸರ್ಕಾರದ ಆದೇಶ ಸಂಖ್ಯೆ: ನಅಇ 597 ಎಂಎನ್‌ವೈ 2017, ದಿನಾಂಕ: 11.12.2017 ರನ್ವಯ ಟೆಂಡರ್‌ಗೆ ಸರ್ಕಾರದ ಅನುಮೋದನೆ ನೀಡಲಾಗಿದ್ದು, ಸದರಿ ಕಾಮಗಾರಿಯನ್ನು ಕೈಗೊಳ್ಳಲು ಸಾರ್ವಜನಿಕರ ವಿರೋಧ ಇರುವುದರಿಂದ, ರೂ.1.50 ಕೋಟಿಗಳ ಅಂದಾಜು ಮೊತ್ತದ "Improvements Suvarna Mahotsava Bhavana play ground at Vidyaranyapura main road in Ward No.09" ಕಾಮಗಾರಿಯ ಬದಲಾಗಿ ಅದೇ ಮೊತ್ತದಲ್ಲಿ, "Balance works and other amenities to Indoor Stadium at Sahakaranagar in Ward No.08" ಕಾಮಗಾರಿಯನ್ನು ಕೈಗೊಳ್ಳಲು ಹಾಗೂ ಸದರಿ ಕಾಮಗಾರಿಯ ಸ್ಥಳ ಬದಲಾವಣೆಗೆ ಮತ್ತು ಈ ಕಾಮಗಾರಿಯನ್ನು ಟೆಂಡರ್ ಮುಖೇನ ನಿರ್ವಹಿಸಲು ಸಾಕಷ್ಟು ಸಮಯಾವಕಾಶ ತೆಗೆದುಕೊಳ್ಳುವುದರಿಂದ, ಹಾಲಿ ಗುತ್ತಿಗೆದಾರರಿಂದಲೇ ಕಾಮಗಾರಿಯನ್ನು ನಿರ್ವಹಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

ಷರತ್ತುಗಳು:

1. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 73 ಎಸ್‌ಎಫ್‌ಸಿ 2016 ದಿನಾಂಕ: 04-03-2016ರ ಯೋಜನೆಯ ಅನುದಾನದಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
2. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
3. ಸರ್ಕಾರವು ಕಾಮಗಾರಿಗಳಿಗೆ ಆಡಳಿತಾತ್ಮಕ ಮತ್ತು ಟೆಂಡರ್‌ಗಳಿಗೆ ಅನುಮೋದನೆ ನೀಡಿದ್ದಾಗ್ಯೂ ಸಹ ಕಾಮಗಾರಿಯು ಪುನರಾವರ್ತನೆ ಆಗದಂತೆ ನೋಡಿಕೊಳ್ಳತಕ್ಕದ್ದು. ಅನುಮೋದನೆಗೊಂಡಿರುವ ಕಾಮಗಾರಿಯನ್ನಲ್ಲದೆ ಯಾವುದೇ ಕಾರಣಕ್ಕೆ ಬೇರೆ ಕಾಮಗಾರಿಗಳನ್ನು ಕೈಗೊಳ್ಳಬಾರದು.
4. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಅಕ್ಷಯ್ ಸಾಗರ್ ವಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.

. . .5/-

4. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.